**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ. 2126/2021**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಓಬಳೇಶ | ಸಿ.ಡಬ್ಲ್ಯೂ.-15 |
| ತಂದೆ ಹೆಸರು | : | ಸೂರಯ್ಯ | ಪಿ.ಡಬ್ಲ್ಯೂ-06 |
| ವಯಸ್ಸು | : | 45 ವರ್ಷ | |
| ಉದ್ಯೋಗ | : | ಟೈಲರ್ | |
| ವಾಸಸ್ಥಳ | : | ವರವು ಗ್ರಾಮ | ದಿಃ 25-02-2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಈ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ಚನ್ನಯ್ಯ ನನಗೆ ಗೊತ್ತು. ಚನ್ನಯ್ಯ ಹಾಲಿ ಮೃತರಾಗಿರುತ್ತಾರೆ. ಹೇಗೆ ಮೃತರಾಗಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅಪಘಾತವನ್ನು ನಾನು ಕಣ್ಣಾರೆ ನೋಡಿರುವುದಿಲ್ಲ. ಈ ಬಗ್ಗೆ ನಾನು ಹೇಳಿಕೆ ನೀಡಿರುವುದಿಲ್ಲ.

ಆರೋಪಿಯು ನನಗೆ ಗೊತ್ತಿಲ್ಲ.

**( ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿನಾಂಕ 14.11.2019 ರಂದು ನಾನು ಮತ್ತು ಏಕಾಂತಪ್ಪ ರವರು ಬಿ ಎಂ ಜೆ ಹೆಚ್ ಎಸ್ ಶಾಲಾ ಆವರಣದಲ್ಲಿ ನಾಟಕ ನೋಡಲು ಹೋಗಿದ್ದೆವು ಎಂದರೆ ಸಕ್ಷಿಯು ನಾನನು ನಾಟಕ ನೋಡಲು ಹೋಗಿದ್ದೆ , ಆದರೆ ಏಕಾಂತಪ್ಪನ ಜೊತೆ ಹೋಗಿರಲಿಲ್ಲ ಎಂದು ನುಡಿಯುತ್ತಾರೆ ಶಾಲೆಯ ಮುಂಭಾಗ ರಾಜಶೇಖರಪ್ಪರವರ ಮನೆಯ ಮುಂಭಾಗ ಕಾಟಪ್ಪ ಮತ್ತು ಚಾಸಾ-14 ರವರ ಜೊತೆ ಮಾತನಾಡುತ್ತಾ ನಿಂತಿದ್ದೆವು ಎಂದರೆ ಸರಿಯಲ್ಲ. ರಾತ್ರಿ 08-30 ರ ಸಮಯದಲ್ಲಿ ಚೆನ್ನಯ್ಯ ರವರು ನಾಟಕ ನೋಡಲು ಬಂದಿದ್ದರು ಎಂದರೆ ನನಗೆ ಗೊತ್ತಿಲ್ಲ. ಆಗ ಚಿತ್ರದುರ್ಗ - ಚಳ್ಳಕೆರೆ ರಸ್ತೆಯಲ್ಲಿರುವ ನೆಹರೂ ಸರ್ಕಲ್ ಹತ್ತಿರ ಚನ್ನಯ್ಯ ರಸ್ತೆ ದಾಟುತ್ತಿದ್ದಾಗ ವಾಲ್ಮಿಕಿ ಸಕರ್ಲ್ ಕಡೆಯಿಂದ ಒಬ್ಬ ಮೋಟಾರ್ ಬೈಕ್ ಸವಾರನು ತನ್ನ ಬಾಬ್ತು ಕೆಎ-16 ಇಸಿ-8182 ಮೋಟಾರ್ ಬೈಕನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚನ್ನಯ್ಯ ರವರಿಗೆ ಡಿಕ್ಕಿ ಪಡಿಸಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಅಪಘಾತದಲ್ಲಿ ಚನ್ನಯ್ಯ ರವರಿಗೆ

ಪೆಟ್ಟುಗಳಾಗಿರುತ್ತವೆ ಎಂದರೆ ನನಗೆ ಗೊತ್ತಿಲ್ಲ. ಚನ್ನಯ್ಯರವರನ್ನು ಆಟೋದಲ್ಲಿ ಆಸ್ಪತ್ರೆಗೆ ಕಳುಹಿಸಿರುತ್ತೇವೆ ಎಂದರೆ ಸರಿಯಲ್ಲ. ಚನ್ನಯ್ಯ ರವರನ್ನು ಚಿಕಿತ್ಸೆಗಾಗಿ ಬೆಂಗಳೂರಿಗೆ ಕರೆದುಕೊಂಡು ಹೋಗುವಾಗ ಮಾರ್ಗ ಮಧ್ಯ ಮೃತರಾಗಿರುವ ವಿಚಾರ ನನಗೆ ಗೊತ್ತಾಗಿರುತ್ತದೆ ಎಂದರೆ ಸರಿ. ಅಪಘಾತ ಪಡಿಸಿದ ವ್ಯಕ್ತಿ ಹರೀಶ ಎಂದು ಗೊತ್ತಾಗಿರುತ್ತದೆ ಎಂದರೆ ಸರಿಯಲ್ಲ.

ದಿನಾಂಕಃ 17.11.2019 ರಂದು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ.13 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಸಿ.ವಿ., ಆರೋಪಿ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ